18

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ : ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2012-13ನೇ ಸಾಲಿನ ಯೋಜನೇತರ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.**

- - - - -

ಓದಲಾಗಿದೆ :-

1. ಸರ್ಕಾರದ ಆದೇಶ ಸಂಖ್ಯೆ : ಕೃಇ 47 ಕೃವಿಬೆ 2012 ದಿನಾಂಕ : 03-05-2012.
2. ಸರ್ಕಾರದ ಆದೇಶ ಸಂಖ್ಯೆ : ಕೃಇ 47 ಕೃವಿಬೆ 2012 ದಿನಾಂಕ : 09-08-2012.
3. ಸರ್ಕಾರದ ಆದೇಶ ಸಂಖ್ಯೆ : ಕೃಇ 47 ಕೃವಿಬೆ 2012, ದಿನಾಂಕ : 03-11-2012.
4. ಸರ್ಕಾರದ ಆದೇಶ ಸಂಖ್ಯೆ : ಕೃಇ 47 ಕೃವಿಬೆ 2012, ದಿನಾಂಕ : 06-02-2013.
5. ಸರ್ಕಾರದ ಆದೇಶ ಸಂಖ್ಯೆ : ಕೃಇ 91 ಕೃವಿಬೆ 2012, ದಿನಾಂಕ : 19-03-2013.
6. ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ದಿನಾಂಕ : 22-03-2013ರ ಪತ್ರ ಸಂಖ್ಯೆ : ಹನಿಅ/ವಿಭಾಗ-3/ ಸಿ5-2/2012-13.
7. ಆರ್ಥಿಕ ಇಲಾಖೆಯ ದಿನಾಂಕ : 28-03-2013ರ ಆದೇಶ ಸಂಖ್ಯೆ : ಎಫ್‌ಡಿ 364 ಬಿಆರ್‌ಎಸ್ 2012.

ಪ್ರಸ್ತಾವನೆ :-

ಬೆಂಗಳೂರು ಕೃಷಿ ವಿಶ್ವವಿದ್ಯಾಲಯಕ್ಕೆ 2012-13ನೇ ಸಾಲಿನ ಯೋಜನೇತರ ಉದ್ದೇಶಗಳಿಗಾಗಿ ರಾಜ್ಯ ಸರ್ಕಾರವು ಲೆಕ್ಕಶೀರ್ಷಿಕೆ 2415-80-004-01-101 ಅಡಿಯಲ್ಲಿ ರೂ. 7500.00 ಲಕ್ಷಗಳ ಅನುದಾನವನ್ನು ಹಂಚಿಕೆ ಮಾಡಿರುತ್ತದೆ. ಮೇಲೆ ಕ್ರ. ಸಂ (1)ರಿಂದ (4)ರವರೆಗೆ ಓದಲಾದ ಸರ್ಕಾರಿ ಆದೇಶಗಳ ಮುಖೇನ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಯೋಜನೇತರ ಉದ್ದೇಶಗಳಿಗಾಗಿ ತಲಾ ರೂ. 1875.00 ಲಕ್ಷಗಳಂತೆ 4 ತ್ರೈಮಾಸಿಕ ಅನುದಾನವಾಗಿ ರೂ. 7500.00 ಲಕ್ಷಗಳ ಸಂಪೂರ್ಣ ಯೋಜನೇತರ ಅನುದಾನ ಬಿಡುಗಡೆ ಮಾಡಿರುತ್ತದೆ.

ಮೇಲೆ ಕ್ರ. ಸಂ. 5ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ಬೋಧಕೇತರ ನೌಕರರಿಗೆ ಮತ್ತು ನಿವೃತ್ತಿ ವೇತನದಾರರಿಗೆ ಕರ್ನಾಟಕ ಸರ್ಕಾರದ 6ನೇ ವೇತನ ಸಮಿತಿಯ ಶಿಫಾರಸಿನನ್ವಯ ವೇತನ ಶ್ರೇಣಿಯ ಸೌಲಭ್ಯಗಳನ್ನು ಏಪ್ರಿಲ್ 2012ರಿಂದ ಅನುಷ್ಠಾನಗೊಳಿಸಿದ್ದು 2013ರ ಮಾರ್ಚ್ ಅಂತ್ಯದವರೆಗೆ ಯೋಜನೇತರ ಉದ್ದೇಶಗಳನ್ನು ಸರಿದೂಗಿಸಿಕೊಳ್ಳಲು ಅನುದಾನದ ಕೊರತೆಯ ಪ್ರಸ್ತಾವನೆಯನ್ನು ಪರಿಶೀಲಿಸಿ ರೂ. 1500.00 ಲಕ್ಷಗಳ ಹೆಚ್ಚುವರಿ ಯೋಜನೇತರ ಅನುದಾನವನ್ನು ಹಂಚಿಕೆ ಮಾಡಿ ಬಿಡುಗಡೆ ಮಾಡಿರುತ್ತದೆ.

ಮೇಲೆ ಕ್ರ. ಸಂ. 6ರಲ್ಲಿ ಓದಲಾದ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಪ್ರಸ್ತಾವನೆಯಲ್ಲಿ ಬೋಧಕರ ಯು.ಜಿ.ಸಿ., ವೇತನ ಶ್ರೇಣಿಯನ್ನು 2006ರಿಂದಲೇ ಅಳವಡಿಕೆ ಹಾಗೂ ಬೋಧಕೇತರ ನೌಕರರ ರಾಜ್ಯ ಸರ್ಕಾರದ 6ನೇ ವೇತನ ಶ್ರೇಣಿಯ ಅನುಷ್ಠಾನದಿಂದಾಗಿ ಯೋಜನೇತರ ಉದ್ದೇಶಗಳಿಗಾಗಿ ಇನ್ನೂ ಅನುದಾನದ ಕೊರತೆ ಇರುವುದನ್ನು ಪುನರ್ ಪರಿಶೀಲಿಸಿದ ಆರ್ಥಿಕ ಇಲಾಖೆಯು ಮೇಲೆ ಕ್ರ. ಸಂ. 7ರಲ್ಲಿ ಓದಲಾದ ಆದೇಶದಂತೆ ಲೆಕ್ಕಶೀರ್ಷಿಕೆ 2401-00-111-0-03-059 (ಯೋಜನೆ) ಅಡಿಯಲ್ಲಿ ಉಳಿತಾಯವಾದ ರೂ. 1500.00 ಲಕ್ಷಗಳನ್ನು ಕೃಷಿ ಸಂಶೋಧನೆ ಮತ್ತು ಕೃಷಿ ಶಿಕ್ಷಣ ಲೆಕ್ಕಶೀರ್ಷಿಕೆ 2415-80-004-1-01-101 (ಯೋಜನೆ)ಗೆ ಮರುಹೊಂದಾಣಿಕೆಗೊಳಿಸಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವೇತನ ಪಾವತಿಸಲು ಅನುದಾನದ ಕೊರತೆಯನ್ನು ಸರಿದೂಗಿಸಿಕೊಳ್ಳಲು ಹೆಚ್ಚುವರಿ ಅನುದಾನವನ್ನು ಹಂಚಿಕೆ ಮಾಡಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಕೃಇ 91 ಕೃವಿಬೆ 2012,**

**ಬೆಂಗಳೂರು, ದಿನಾಂಕ : 28-03-2013.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವೇತನ ಪಾವತಿಸಲು ಯೋಜನೇತರ ಉದ್ದೇಶಗಳಿಗೆ ಅನುದಾನದ ಕೊರತೆಯನ್ನು

ಸರಿದೂಗಿಸಿಕೊಳ್ಳಲು ಲೆಕ್ಕಶೀರ್ಷಿಕೆ 2401–00–111–0–03–059 (ಯೋಜನೆ) ಅಡಿಯಲ್ಲಿ ಉಳಿತಾಯವಾದ ರೂ. 1500.00 ಲಕ್ಷಗಳನ್ನು (ಒಂದು ಸಾವಿರದ ಐದು ನೂರು ಲಕ್ಷ ರೂಪಾಯಿಗಳು ಮಾತ್ರ) ಕೃಷಿ ಸಂಶೋಧನೆ ಮತ್ತು ಕೃಷಿ ಶಿಕ್ಷಣ ಲೆಕ್ಕಶೀರ್ಷಿಕೆ 2415–80–004–1–01–101 (ಯೋಜನೆ)ಗೆ ಮರುಹೊಂದಾಣಿಕೆಗೊಳಿಸಿ ಹಂಚಿಕೆ ಮಾಡಿರುವಂತೆ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆಗೊಳಿಸಿ ಆದೇಶಿಸಿದೆ :–

1. ಪ್ರತಿ ತಿಂಗಳ ಅನುದಾನವನ್ನು ಆಯಾ ತಿಂಗಳ 20ನೇ ತಾರೀಖಿನಂದು ಅಥವಾ 20ನೇ ತಾರೀಖಿನ ನಂತರ ಹಿಂದಿನ ತಿಂಗಳ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು;
2. ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು;
3. ಸರ್ಕಾರವು ನೀಡಿದ ಸೂಚನೆ, ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ಯೋಜನೆಯ ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು;
4. ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು;
5. ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ;
6. ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಸರ್ಕಾರದ ಅಧೀನ ಕಾರ್ಯದರ್ಶಿ (ಯೋಜನೆ), ಕೃಷಿ ಇಲಾಖೆ, ಇವರಿಗೆ ನೀಡಲಾಗಿದೆ.

3. ಈ ಆದೇಶವನ್ನು ಆರ್ಥಿಕ ಇಲಾಖೆಯ ದಿನಾಂಕ : 28–03–2013 ಟಿಪ್ಪಣಿ ಸಂಖ್ಯೆ : ಆಇ 486 ವೆಚ್ಚ–4/ 2012 ಮತ್ತು ದಿನಾಂಕ : 28–03–2013ರ ಆದೇಶ ಸಂಖ್ಯೆ : ಎಫ್‌ಡಿ 364 ಬಿಆರ್‌ಎಸ್ 2012ರಲ್ಲಿ ನೀಡಿರುವ ಸಹಮತಿಗಳನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ. ಆರ್. ವಿಶ್ವನಾಥಾಚಾರ್) 28/3
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಕೃಷಿ ಯೋಜನೆ)

ಇವರಿಗೆ :–
1. ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ/ತನಿಖೆ), ಬೆಂಗಳೂರು.
2. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
3. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು–560 001.
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
7. ಉಪ ನಿರ್ದೇಶಕರು, ನೆಟ್‌ವರ್ಕ್ ಮೇನೇಜ್‌ಮೆಂಟ್ ಸೆಂಟರ್, ನಂ. 49, 2ನೇ ಬ್ಲಾಕ್, 2ನೇ ಅಂತಸ್ತು, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–4 & 5), ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆರವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.